ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 321 ಪಿಬಿಎಸ್ 2018

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ :17-07-2018

## ಅಧಿಸೂಚನೆ

ಶಿಕ್ಷಣ ಇಲಾಖೆ ಸೇವೆಗಳು, (ಸಾರ್ವಜನಿಕ ಶಿಕ್ಷಣ ಇಲಾಖೆ) (ನೇಮಕಾತಿ)(ತಿದ್ದುಪಡಿ) ನಿಯಮಗಳು 2017ರನ್ವಯ ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 78 ಹೈಕಕೋ 2014 ದಿನಾಂಕ:16-11-2016ರಂದು ಹೊರಡಿಸಿರುವ ಮಾರ್ಗಸೂಚಿಗಳನ್ವಯ ಸರ್ಕಾರಿ ಪ್ರಾಥಮಿಕ ಶಾಲೆಗಳ, ಪದವೀಧರ ಪ್ರಾಥಮಿಕ ಶಿಕ್ಷಕರು (6 ರಿಂದ 8ನೇ ತರಗತಿ) ವೃಂದಕ್ಕೆ ಒಟ್ಟು 10,000 ಶಿಕ್ಷಕರ ನೇಮಕಾತಿಗೆ ಆಯಾ ಜಿಲ್ಲಾ ನೇಮಕಾತಿ ಮತ್ತು ಆಯ್ಕೆ ಪ್ರಾಧಿಕಾರಿಗಳಾದ ಜಿಲ್ಲಾ ಉಪ ನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರು ನಿಗಧಿಪಡಿಸಿರುವ ಪರೀಕ್ಷೆಗಳನ್ನು ನಿಯಮಾನುಸಾರ ಪ್ರತ್ಯೇಕವಾಗಿ ನಡೆಸಲು ಅಧಿಸೂಚನೆ ಸಂಖ್ಯೆ:ಇಡಿ 399 ಪಿಬಿಎಸ್ 2017(2) ದಿನಾಂಕ:22-08-2017ರಲ್ಲಿ ಸ್ಪರ್ಧಾತ್ಮಕ ಪರೀಕ್ಷೆಯ ವಿವರಗಳನ್ನು ಮತ್ತು ಸದರಿ ಸ್ಪರ್ಧಾತ್ಮಕ ಪರೀಕ್ಷೆಯು ಒಳಗೊಂಡಿರುವ ಪತ್ರಿಕೆಗಳನ್ನು ನಿಗಧಿಪಡಿಸಲಾಗಿತ್ತು. ಹಾಗು ಸ್ಪರ್ಧಾತ್ಮಕ ಪರೀಕ್ಷೆ ಪೇಪರ್-2ರಲ್ಲಿ ಶೇಕಡ 50 ಅಂಕಗಳನ್ನು ಮತ್ತು ಸ್ಪರ್ಧಾತ್ಮಕ ಪರೀಕ್ಷೆಯ ಬೋಧನಾ ಭಾಷಾ ಸಾಮರ್ಥ್ಯ ಪರೀಕ್ಷೆಯ (ಪೇಪರ್-3)ರಲ್ಲಿ ಕನಿಷ್ಟ ಶೇಕಡ 60 ಅಂಕಗಳನ್ನು ಪಡೆಯಬೇಕು ಎಂದು ನಿರ್ದಿಷ್ಟಪಡಿಸಲಾಗಿತ್ತು. ಕನಿಷ್ಟ ಅಂಕಗಳ ನಿಗಧಿಯಿಂದಾಗಿ ಅಗತ್ಯ ಸಂಖ್ಯೆಯಲ್ಲಿ ಅಭ್ಯರ್ಥಿಗಳು ಲಭ್ಯವಾಗದೇ ಇರುವುದನ್ನು ಮತ್ತು ಅರ್ಹತಾ ಮಾನದಂಡಗಳನ್ನು ಸಡಿಲಗೊಳಿಸಲು ಇರುವ ಬೇಡಿಕೆಗಳನ್ನು ಸರ್ಕಾರವು ಪರಿಗಣಿಸಿದೆ.

ಸ್ಪರ್ಧಾತ್ಮಕ ಪರೀಕ್ಷೆಯ ಪೇಪರ್-2ರಲ್ಲಿ ಶೇಕಡ 50 ರಷ್ಟು ಅಂಕಗಳನ್ನು ಮತ್ತು ಬೋಧನಾ ಭಾಷಾ ಸಾಮರ್ಥ್ಯ ಪರೀಕ್ಷೆಯಲ್ಲಿ ಕನಿಷ್ಟ ಶೇಕಡ 60 ರಷ್ಟು ಅಂಕಗಳನ್ನು ಪಡೆಯಬೇಕು ಎಂದು ನಿಗಧಿಪಡಿಸಲಾಗಿರುವ ಆಯ್ಕೆಯ ಅರ್ಹತೆಯು ಎಲ್ಲಾ ಅಭ್ಯರ್ಥಿಗಳಿಗೂ ಅನ್ವಯವಾಗುವಂತೆ ಪುನರ್‌ಪರಿಷ್ಕರಿಸುತ್ತಿರುವುದರಿಂದ, ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಭಾಗವಹಿಸಿರುವ ಎಲ್ಲಾ ಅಭ್ಯರ್ಥಿಗಳಿಗೂ ಈ ಲಾಭವು ಲಭ್ಯವಾಗುವುದರಿಂದ ಆಯ್ಕೆಯಲ್ಲಿ ತಾರತಮ್ಯ ಮಾಡಿದಂತಾಗುವುದಿಲ್ಲ ಎಂಬುದನ್ನು ಗಣನೆಗೆ ತೆಗೆದುಕೊಳ್ಳಲಾಗಿದೆ. ಈ ಕುರಿತಾಗಿ ಕಾನೂನು ಇಲಾಖೆಯಿಂದ ಪಡೆಯಲಾದ ಅಭಿಪ್ರಾಯದ ಹಿನ್ನೆಲೆಯಲ್ಲಿ ಪ್ರಸ್ತುತ ಸದರಿ ಆಯ್ಕೆಯ ಅರ್ಹತೆಯ ಷರತ್ತನ್ನು ಪೂರ್ವಾನ್ವಯವಾಗಿ ಸಡಿಲಗೊಳಿಸಿ ಆದೇಶಿಸಿದೆ.

--

ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 399 ಪಿಜಿಎಸ್ 2017(2) ದಿನಾಂಕ:22-08-2017ಲ್ಲಿನ ಇತರೆ ಸೂಚನೆಗಳು ಯಥಾವತ್ತಾಗಿ ಮುಂದುವರೆಯುತ್ತವೆ ಮತ್ತು ಪೇಪರ್-2 ಮತ್ತು ಪೇಪರ್-3ರಲ್ಲಿ ಅಭ್ಯರ್ಥಿಗಳಿಗೆ ಯಾವುದೇ ಕನಿಷ್ಟ ಅಂಕಗಳನ್ನು ನಿಗಧಿಪಡಿಸದೆ. ಅಭ್ಯರ್ಥಿಗಳು ಗಳಿಸುವ ಅಂಕಗಳನ್ನು ಯಥಾವತ್ತಾಗಿ ಶೇಕಡಾವಾರು ಅಂಕಗಳ ಲೆಕ್ಕಾಚಾರಕ್ಕೆ ಪರಿಗಣಿಸಿ. ನೇಮಕಾತಿ ಪ್ರಕ್ರಿಯೆಯನ್ನು ಹಮ್ಮಿಕೊಳ್ಳಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಹೆಚ್.ಎಂ. ರಾಘವೇಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರಾಥಮಿಕ ಶಿಕ್ಷಣ)
ಶಿಕ್ಷಣ ಇಲಾಖೆ

ಪ್ರತಿ:-

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ & ಧಾರವಾಡ.
3. ನಿರ್ದೇಶಕರು (ಪ್ರಾಥಮಿಕ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ವಿಶೇಷಾಧಿಕಾರಿಗಳು, ಕೇಂದ್ರೀಕೃತ ದಾಖಲಾತಿ ಘಟಕ, ಕೆಂಪೇಗೌಡ ರಸ್ತೆ, ಬೆಂಗಳೂರು.
5. ರಾಜ್ಯದ ಎಲ್ಲಾ ಉಪ ನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, (ಆಯುಕ್ತರ ಮುಖಾಂತರ)
6. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿ, ಸಾರ್ವಜನಿಕ ಶಿಕ್ಷಣ ಇಲಾಖೆ, (ಜಿಲ್ಲಾ ಉಪ ನಿರ್ದೇಶಕರು (ಆಡಳಿತ) ಇವರ ಮುಖಾಂತರ)
7. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿ.